# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ವಾರ್ಡ್ ಸಂಖ್ಯೆ 09/ಸಭೆ/ಪಿಆರ್/ /2021-22 ದಿನಾಂಕ : 18/01/2022

**ಮಾನ್ಯ ಆಯುಕ್ತರು ರವರ ಸುತ್ತೋಲೆ ಸಂಖ್ಯೆ ಬಿ12(5)/ಪಿ.ಆರ್/35/2020-21 ದಿನಾಂಕ 21/09/2020ರ ಆದೇಶದ ಅನ್ವಯ ವಾರ್ಡ್ ನಂ 09 ವಿದ್ಯಾರಣ್ಯಪುರ ವಾರ್ಡ್ ಕಛೇರಿಯಲ್ಲಿ ದಿನಾಂಕ 18/01/2022 ರಂದು ನೋಡೆಲ್ ಅಧಿಕಾರಿ ರವರ ಅಧ್ಯಕ್ಷತೆಯಲ್ಲಿ ಕೈಗೊಂಡ ವಾರ್ಡ್ ಸಮಿತಿ ಸಭೆಯ ನಡವಳಿಗಳು**

**ಹಾಜರಿದ್ದ ಅಧಿಕಾರಿ /ನೌಕರರು**

1. ಶ್ರೀ ಶಿವಕುಮಾರ್ ಮುತ್ತುಸ್ವಾಮಿ ಗೌಡರ್, ನೋಡಲ್ ಅಧಿಕಾರಿ ಹಾಗೂ ಸಹಾಯಕ ಕಾರ್ಯಪಾಲಕ ಅಭಿಯಂತರರು, ವಿದ್ಯಾರಣ್ಯಪುರ ಉಪವಿಭಾಗ
2. ಶ್ರೀ ಸೋಮಶೇಖರ್ ಜಿ.ಎಲ್, ಸಹಾಯಕ ಅಭಿಯಂತರರು & ಕಾರ್ಯದರ್ಶಿ ಹಾಗೂ ಸಂಚಾಲಕರು
3. ಕು॥ ಧನಲಕ್ಷ್ಮಿ, ಸಹಾಯಕ ಅಭಿಯಂತರರು, ಬಿಡಬ್ಲ್ಯೂಎಸ್ಎಸ್‌ಬಿ
4. ಶ್ರೀ ಪಿ.ಎಂ ಮಲಯಾದ್ರಿ, ಕೆಲಸ ಪರಿವೀಕ್ಷಕರು, ತೋಟಗಾರಿಕೆ
5. ಶ್ರೀ ಭಾರ್ಗವ ಪಿ.ಎನ್, ಕಿರಿಯ ಆರೋಗ್ಯ ಪರಿವೀಕ್ಷಕರು
6. ಶ್ರೀ ಸಿದ್ದರಾಜು, ಕಿರಿಯ ಆರೋಗ್ಯ ಪರಿವೀಕ್ಷಕರು

**ಹಾಜರಿದ್ದ ವಾರ್ಡ್ ಸಮಿತಿ ಸದಸ್ಯರು**

1. ಬಡಾವಣೆ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷರು/ಕಾರ್ಯದರ್ಶಿ/ಸದಸ್ಯರು
2. ಸಾರ್ವಜನಿಕರು

**ಶ್ರೀ ಸೋಮಶೇಖರ್ ಜಿ.ಎಲ್, ಸಹಾಯಕ ಅಭಿಯಂತರರು:-** ಸಭೆಗೆ ಹಾಜರಿದ್ದ ಅಧಿಕಾರಿ ಹಾಗೂ ಸದಸ್ಯರನ್ನು ಪರಿಚಯ ಮಾಡಿಕೊಳ್ಳುವುದರ ಮುಖಾಂತರ ಸ್ವಾಗತವನ್ನು ಕೋರಿದರು.

ನೋಡೆಲ್ ಅಧಿಕಾರಿ ರವರು ವಾರ್ಡಿಗೆ ಸಂಬಂಧಿಸಿದ ವಿಷಯಗಳ ಬಗ್ಗೆ ಚರ್ಚಿಸಲು ಎಲ್ಲರನ್ನು ಕೋರಿ ಸಭೆಯಲ್ಲಿ ನಡೆಯುವ ನಡವಳಿಗಳನ್ನು ನಮೂದಿಸಲು ತಿಳಿಸಿದರು.

**ವಸತಿ ಕ್ಷೇಮಾಭಿವೃದ್ಧಿ ಸಂಘದ ಸದಸ್ಯರು**

ವಿದ್ಯಾರಣ್ಯಪುರ ಮುಖ್ಯ ರಸ್ತೆ, ಹೆಚ್.ಎಂ.ಟಿ ಲೇಔಟ್, ಬಿ.ಇ.ಎಲ್ ಲೇಔಟ್ ವ್ಯಾಪ್ತಿಯಲ್ಲಿ ಮರದ ಕೊಂಬೆಗಳ ಮೇಲೆ ವಿದ್ಯುತ್ ತಂತಿಗಳು ತಾಗುತ್ತಿರುವುದರಿಂದ ಮರದ ಕೊಂಬೆಗಳನ್ನು ಟ್ರಿಮ್ ಮಾಡಲು ಕೋರಿದರು.

**ಕ್ರಮ: ಸಕಾಲ, ಬೆಸ್ಕಾಂ**

ಹೆಚ್.ಎಂ.ಟಿ ಲೇಔಟ್ 5ನೇ ಬ್ಲಾಕ್, ಎನ್.ಟಿ.ಐ ಲೇಔಟ್, ಬಿ.ಇ.ಎಲ್ ಲೇಔಟ್ ವ್ಯಾಪ್ತಿಯಲ್ಲಿ ಮರದ ರೆಂಬೆ ಕೊಂಬೆಗಳು ಬೃಹದಾಕಾರವಾಗಿ ಬೆಳೆದಿರುವುದರಿಂದ ತೆರವುಗೊಳಿಸಲು, ಬಿ.ಇ.ಎಲ್ 1ನೇ ಬ್ಲಾಕ್‌ನಲ್ಲಿ ಒಣ ಮರ ಇರುವುದರಿಂದ ತೆರವುಗೊಳಿಸಲು ಕೋರಿದರು.

**ಕ್ರಮ: ಉಪವಲಯ ಅರಣ್ಯ ಸಂರಕ್ಷಣಾಧಿಕಾರಿ, ಬ್ಯಾಟರಾಯನಪುರ**

ವಿದ್ಯಾರಣ್ಯಪುರ ಮುಖ್ಯ ರಸ್ತೆ, ಎನ್.ಟಿ.ಐ ಬಡಾವಣೆ, ಜ್ಞಾನೇಶ್ವರಿ ಬಡಾವಣೆ ವ್ಯಾಪ್ತಿಯಲ್ಲಿ ರಸ್ತೆ ಗುಡಿಸುವಿಕೆ ಕಾರ್ಯ ಸಮರ್ಪಕವಾಗಿರುವುದಿಲ್ಲ, ಮರದ ಎಲೆಗಳನ್ನು ತೆರವುಗೊಳಿಸುತ್ತಿರುವುದಿಲ್ಲವೆಂದು ದೂರು ನೀಡಿದರು.

**ಕ್ರಮ: ಕಿರಿಯ ಆರೋಗ್ಯ ಪರಿವೀಕ್ಷಕರು**

ರ್ ಎಂ.ವಿ ಲೇಔಟ್ ಮತ್ತು ಬಿ.ಇ.ಎಲ್ ಬಡಾವಣೆಗಳ ರಸ್ತೆಗಳಲ್ಲಿ ಜಿಯೋ, ಏರ್‌ಟೆಲ್ ಮತ್ತಿತರ ಕಂಪೆನಿಗಳ ೇಬಲ್‌ಗಳನ್ನು ಅಳವಡಿಸಲು ರಸ್ತೆ ಅಗೆದು ಹಾಳು ಮಾಡಿರುವುದರಿಂದ ಸರಿಪಡಿಸಲು, ಚರಂಡಿಯಲ್ಲಿ ಮಣ್ಣು ಮತ್ತು ಹೂಳು ತುಂಬಿರುವುದರಿಂದ ನೀರು ಚರಂಡಿಗೆ ಹರಿಯದೆ ರಸ್ತೆಯಲ್ಲಿ ಹರಿಯುತ್ತಿರುವುದರಿಂದ ಸರಿಪಡಿಸಲು ಹಾಗೂ ಂಡ್ಲು, ಗುರುದರ್ಶನ್ ಲೇಔಟ್, ಜ್ಞಾನೇಶ್ವರಿ ಬಡಾವಣೆ ವ್ಯಾಪ್ತಿಯಲ್ಲಿ ರಸ್ತೆ ಗುಂಡಿಗಳು ಬಿದ್ದಿದ್ದು ಡಾಂಬರೀಕರಣ ಮಾಡಲು ಕೋರಿದರು.

**ಮ: ಸ.ಕಾ.ಅ, ವಿ.ಉ.ವಿ**

ೋಡೆಲ್ ಅಧಿಕಾರಿಗಳು ಈ ಮೇಲ್ಕಂಡ ಅಂಶಗಳ ಬಗ್ಗೆ ಸಭೆಯಲ್ಲಿ ಉಪಸ್ಥಿತರಿದ್ದ ಅಧಿಕಾರಿಗಳು ಹಾಗೂ ದಸ್ಯರೊಂದಿಗೆ ಕೂಲಂಕುಶವಾಗಿ ಚರ್ಚಿಸಿದ್ದು, ಸದರಿ ವಿಷಯಗಳ ಬಗ್ಗೆ ಕ್ರಮ ಕೈಗೊಳ್ಳಲು ಸರ್ವಾನುಮತದಿಂದ ೀರ್ಮಾನಿಸಿ ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಕಾರ್ಯದರ್ಶಿಗಳು
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ನಂ 09, ವಿದ್ಯಾರಣ್ಯಪುರ

ನೋಡೆಲ್ ಅಧಿಕಾರಿ ಹಾಗೂ
ಸಹಾಯಕ ಕಾರ್ಯಪಾಲಕ ಅಭಿಯಂತರರು
ವಿದ್ಯಾರಣ್ಯಪುರ ಉಪವಿಭಾಗ

ಪ್ರತಿಯನ್ನು:

1. ಮಾನ್ಯ ಆಯುಕ್ತರು, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
2. ಮಾನ್ಯ ಜಂಟಿ ಆಯುಕ್ತರು, ಯಲಹಂಕ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
3. ಮಾನ್ಯ ಅಪರ ಆಯುಕ್ತರು, ಘನತ್ಯಾಜ್ಯ ವಿಭಾಗ, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
4. ಮುಖ್ಯ ಅಭಿಯಂತರರು, ಯಲಹಂಕ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
5. ಕಾರ್ಯಪಾಲಕ ಅಭಿಯಂತರರು, ಬ್ಯಾಟರಾಯನಪುರ ವಿಭಾಗ, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
6. ಸಹಾಯಕ ಕಾರ್ಯಪಾಲಕ ಅಭಿಯಂತರರು, ವಿದ್ಯಾರಣ್ಯಪುರ ಉಪವಿಭಾಗ, ಬಿಬಿಎಂಪಿ ರವರ ಮಾಹಿತಿಗಾಗಿ ಸಲ್ಲಿಸಿದೆ.
7. ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ವಿಭಾಗ, ಬಿಬಿಎಂಪಿ ರವರ ಮಾಹಿತಿಗಾಗಿ ಸಲ್ಲಿಸಿದೆ.
8. ಕಾರ್ಯದರ್ಶಿ ಹಾಗೂ ಸಂಚಾಲಕರು, ವಾರ್ಡ್ ಕಮಿಟಿ ರವರ ಮಾಹಿತಿಗಾಗಿ ಸಲ್ಲಿಸಿದೆ.
9. ವಾರ್ಡ್ ಕಮಿಟಿ ಸದಸ್ಯರುಗಳ ಮಾಹಿತಿಗಾಗಿ ಸಲ್ಲಿಸಿದೆ.
10. ಕಛೇರಿ ಕಡತಕ್ಕೆ.